ಚುನಾವಣಾ ಜರೂರು

सत्यमेव जयते

# ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

ನಂ.ರಾಚುಆ.95.ಇಯುಬಿ.2017

ಕರ್ನಾಟಕ ರಾಜ್ಯ ಸಹಕಾರ ಮಾರಾಟ
ಮಂಡಳಿ ಕಟ್ಟಡ (ಹಿಂಭಾಗ) 1ನೇ ಮಹಡಿ
ನಂ.8, ಕನ್ನಿಂಗ್ ಹ್ಯಾಂ ರಸ್ತೆ.
ಬೆಂಗಳೂರು-560052 ದಿನಾಂಕ: 22-11-2017

## ನಗರ ಸ್ಥಳೀಯ ಸಂಸ್ಥೆಗಳ ಉಪಚುನಾವಣೆ-2017

ರಾಜ್ಯ ಚುನಾವಣಾ ಆಯೋಗವು ಬೆಂಗಳೂರು ನಗರ, ಚಿಕ್ಕಮಗಳೂರು, ವಿಜಯಪುರ, ಮತ್ತು ಕಲಬುರಗಿ ಜಿಲ್ಲೆಗಳಲ್ಲಿನ ನಗರ ಸ್ಥಳೀಯ ಸಂಸ್ಥೆಗಳ ವಾರ್ಡುಗಳ ವಿವಿಧ ಕಾರಣಗಳಿಂದ ತೆರವಾಗಿರುವ ಸದಸ್ಯ ಸ್ಥಾನನಕ್ಕೆ ಈ ಕೆಳಗಿನ ಚುನಾವಣಾ ವೇಳಾಪಟ್ಟಿಯಂತೆ ಉಪಚುನಾವಣೆಯನ್ನು ನಡೆಸಲು ಕರ್ನಾಟಕ ಮುನಿಸಿಪಾಲಿಟೀಸ್ (ಕೌನ್ಸಿಲರುಗಳ ಚುನಾವಣೆ) ನಿಯಮಗಳು 1977 ರ ನಿಯಮ 3(1) ರಂತೆ ಆದೇಶಿಸಿದೆ.

| ಕ್ರಸಂ | ಜಿಲ್ಲೆ | ನಗರ ಸ್ಥಳೀಯ ಸಂಸ್ಥೆಯ ಹೆಸರು | ವಾರ್ಡ್ ನಂ |
|---|---|---|---|
| 01 | ಬೆಂಗಳೂರು ನಗರ | ಬೊಮ್ಮಸಂದ್ರ ಪುರಸಭೆ | 16 |
| 02 | ಚಿಕ್ಕಮಗಳೂರು | ಕಡೂರು ಪುರಸಭೆ | 14 |
| 03 | ವಿಜಯಪುರ | ಇಂಡಿ ಪುರಸಭೆ | 15 |
| 04 | ಕಲಬುರಗಿ | ವಾಡಿ ಪುರಸಭೆ | 01 |

## ಚುನಾವಣಾ ವೇಳಾ ಪಟ್ಟಿ

| | | |
|---|---|---|
| 1 | ಜಿಲ್ಲಾಧಿಕಾರಿಗಳು ಚುನಾವಣಾ ಅಧಿಸೂಚನೆಯನ್ನು ಹೊರಡಿಸುವ ದಿನಾಂಕ ಮತ್ತು ದಿನ | 29-11-2017 ಬುಧವಾರ |
| 2 | ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನಾಂಕ ಮತ್ತು ದಿನ | 06-12-2017 ಬುಧವಾರ |
| 3 | ನಾಮಪತ್ರಗಳನ್ನು ಪರಿಶೀಲಿಸುವ ದಿನಾಂಕ ಮತ್ತು ದಿನ | 07-12-2017 ಗುರುವಾರ |
| 4 | ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನಾಂಕ ಮತ್ತು ದಿನ | 09-12-2017 ಶನಿವಾರ |
| 5 | ಮತದಾನ ಅವಶ್ಯವಿದ್ದರೆ, ಮತದಾನವನ್ನು ನಡೆಸ ಬೇಕಾದ ದಿನಾಂಕ ಮತ್ತು ದಿನ ಸಮಯ ಬೆಳಿಗ್ಗೆ 7.00 ಘಂಟೆಯಿಂದ ಸಾಯಂಕಾಲ 5.00 ಘಂಟೆವರೆಗೆ | 17-12-2017 ಭಾನುವಾರ |
| 6 | ಮರು ಮತದಾನ ಇದ್ದಲ್ಲಿ ಮತದಾನದ ಸಮಯ ಬೆಳಿಗ್ಗೆ 7.00 ಘಂಟೆಯಿಂದ ಸಾಯಂಕಾಲ 5.00 ಘಂಟೆವರೆಗೆ | 19-12-2017 ಮಂಗಳವಾರ |
| 7 | ಮತಗಳ ಎಣಿಕೆಯ ದಿನಾಂಕ ಮತ್ತು ದಿನ ಬೆಳಿಗ್ಗೆ 8.00 ಘಂಟೆಯಿಂದ ತಾಲ್ಲೂಕಿನ ಕೇಂದ್ರ ಸ್ಥಳದಲ್ಲಿ | 20-12-2017 ಬುಧವಾರ |
| 8 | ಚುನಾವಣೆಯನ್ನು ಯಾವ ದಿನಾಂಕಕ್ಕೆ ಮುಂಚೆ ಮುಕ್ತಾಯಗೊಳಿಸಬೇಕೋ ಆ ದಿನಾಂಕ ಮತ್ತು ದಿನ | 20-12-2017 ಬುಧವಾರ |

ಜಿಲ್ಲಾಧಿಕಾರಿಗಳು ಆಯೋಗವು ಆದೇಶಿಸಿದ ಚುನಾವಣಾ ವೇಳಾಪಟ್ಟಿಯನ್ನು ಅನುಸರಿಸಿ ಕರ್ನಾಟಕ ಮುನಿಸಿಪಾಲಿಟಿಸ್ (ಎಲೆಕ್ಷನ್ ಆಫ್ ಕೌನ್ಸಿಲರ್ಸ್) ನಿಯಮಗಳು 1977 ರ ನಿಯಮ 8 ರ ಪ್ರಕಾರ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತಿಗಳಿಗೆ ಸಂಬಂಧಿಸಿದ ಚುನಾವಣಾ ಅಧಿಸೂಚನೆಯನ್ನು ಫಾರಂ ನಂ.1ರಲ್ಲಿ ಹೊರಡಿಸತಕ್ಕದ್ದು. ಹಾಗೆ ಹೊರಡಿಸಲಾದ ಅಧಿಸೂಚನೆಯನ್ನು ಅದೇ ದಿನದಂದು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸತಕ್ಕದ್ದು. ಪ್ರಕಟಿತ ಅಧಿಸೂಚನೆಯ ಪ್ರತಿಗಳನ್ನು ಜಿಲ್ಲಾಧಿಕಾರಿ ಕಛೇರಿ, ಸಂಬಂಧಪಟ್ಟ ನಗರ ಸ್ಥಳೀಯ ಸಂಸ್ಥೆಗಳ ಕಛೇರಿ ಹಾಗೂ ಇನ್ನಿತರ ಮುಖ್ಯ ಸ್ಥಳಗಳಲ್ಲಿಯೂ ಸಹಾ ಪ್ರದರ್ಶಿಸತಕ್ಕದ್ದು ಹಾಗೂ ಆಯೋಗಕ್ಕೆ ಅಂದೇ ಇ-ಮೇಲ್ ಮೂಲಕ ಕಳುಹಿಸುವುದು.

ಅಧಿಸೂಚನೆಯ ಪ್ರತಿಯೊಂದಿಗೆ ಸಂಬಂಧಿಸಿದ ಚುನಾವಣಾಧಿಕಾರಿಗಳಿಗೆ ಕಳುಹಿಸಿಕೊಟ್ಟು ಅದೇ ದಿನದಂದು ಪ್ರಪತ್ರ-1ಎ ರಲ್ಲಿ ಚುನಾವಣಾ ನೋಟೀಸನ್ನು ಪ್ರಕಟಿಸುವಂತೆ ಸೂಚನೆಗಳನ್ನು ನೀಡತಕ್ಕದ್ದು ಹಾಗೂ ಚುನಾವಣೆ ಪ್ರಕ್ರಿಯೆಯನ್ನು ಪ್ರಕಟಿಸುವಂತೆ ಸೂಚಿಸುವುದು. ಚುನಾವಣೆ ನಡೆಯುವ ನಗರ ಸ್ಥಳೀಯ ಸಂಸ್ಥೆ ಹೆಸರು, ವಾರ್ಡುಗಳ ಸಂಖ್ಯೆ, ಮೀಸಲಾತಿ ವಿವರಗಳನ್ನು ಸ್ಪಷ್ಟವಾಗಿ ನಮೂದಿಸುವಂತೆ ಸೂಚನೆಗಳನ್ನು ನೀಡತಕ್ಕದ್ದು. ಸಾರ್ವಜನಿಕರ ಮಾಹಿತಿಗಾಗಿ ದಿನಪತ್ರಿಕೆಗಳಲ್ಲಿ ಹಾಗೂ ಸ್ಥಳೀಯ ಪತ್ರಿಕೆಗಳಲ್ಲಿ (ವೆಚ್ಚ ಬಾರದಂತೆ) ಪ್ರಕಟಿಸಲು ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವುದು. ಚುನಾವಣಾಧಿಕಾರಿ/ ಸಹಾಯಕ ಚುನಾವಣಾಧಿಕಾರಿಗಳನ್ನು ನೇಮಿಸಿ ನೇಮಕಾತಿ ಆದೇಶದ ಪ್ರತಿಯನ್ನು ಆಯೋಗಕ್ಕೆ ಕಳುಹಿಸುವುದು.

<u>ವಿಶೇಷ ಸೂಚನೆ :-</u>

1. ಈಗಾಗಲೇ ನೀಡಿರುವ ನಿರ್ದೇಶನಗಳಂತೆ, ಚುನಾವಣೆ ನಡೆಯಲಿರುವ ನಗರ ಸ್ಥಳೀಯ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಹಾಲಿ ಚಾಲ್ತಿಯಲ್ಲಿರುವ ವಿಧಾನಸಭಾ ಮತದಾರರ ಪಟ್ಟಿಯನ್ನು ಅಳವಡಿಸಿಕೊಂಡು ತಯಾರಿಸಲಾಗುವ ಮತದಾರರ ಪಟ್ಟಿಯಂತೆ ಚುನಾವಣೆ ನಡೆಸುವುದು.
2. ಚುನಾವಣೆ ನಡೆಸಲಾಗುವ ನಗರ ಸ್ಥಳೀಯ ಸಂಸ್ಥೆಗಳ ಚುನಾವಣಾಧಿಕಾರಿ ಹಾಗೂ ಸಹಾಯಕ ಚುನಾವಣಾಧಿಕಾರಿಗಳನ್ನು ನೇಮಕ ಮಾಡಿ ಅವರಿಗೆ ತರಬೇತಿಯನ್ನು ಹಾಗೂ ಚುನಾವಣೆಗೆ ಸಂಬಂಧಪಟ್ಟ ಎಲ್ಲಾ ಅಗತ್ಯ ಮಾಹಿತಿ ಹಾಗೂ ಸುತ್ತೋಲೆ ನಿರ್ದೇಶನ ಪತ್ರಗಳ ಪ್ರತಿಯನ್ನು ನೀಡುವುದು.
3. ನೀತಿ ಸಂಹಿತೆ ಉಲ್ಲಂಘನೆ ಪ್ರಕರಣಗಳು ಗಮನಕ್ಕೆ ಬಂದಾಗ ಆಯೋಗದ ಆದೇಶ ಸಂಖ್ಯೆ: ಎಸ್ಇಸಿ.10. ಎಂಐಎಸ್‌ಸಿ.2016 ದಿನಾಂಕ: 29-06-2016 ಹಾಗೂ ತಿದ್ದುಪಡಿ ದಿನಾಂಕ: 06-07-2016 ರಂತೆ ಕ್ರಮವಹಿಸುವುದು.
4. ಚುನಾವಣೆ ನಡೆಸಲಾಗುತ್ತಿರುವ ನಗರ ಸ್ಥಳೀಯ ಸಂಸ್ಥೆಗಳ ಬಗ್ಗೆ ಸಾರ್ವಜನಿಕರ ಮಾಹಿತಿಗಾಗಿ ಸ್ಥಳೀಯ ಪತ್ರಿಕೆಗಳಲ್ಲಿ ಸುದ್ದಿಯಾಗಿ (ವೆಚ್ಚ ಬಾರದಂತೆ) ಪ್ರಕಟಿಸಲು ಸೂಕ್ತ ಕ್ರಮ ತೆಗೆದುಕೊಳ್ಳುವುದು.
5. ಕಾಲಕಾಲಕ್ಕೆ ಚುನಾವಣೆಗೆ ಸಂಬಂಧಿಸಿದ ವರದಿಯನ್ನು ಆಯೋಗಕ್ಕೆ ಸಲ್ಲಿಸವುದು.
6. ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ: ರಾಚುಆ.14.ಇಯುಬಿ.2017 ದಿನಾಂಕ: 10-03-2017 ರಂತೆ ಮತಪತ್ರದಲ್ಲಿ "NOTA" ಅವಕಾಶ ಕಲ್ಪಿಸಲು ಆದೇಶಿಸಿದೆ.

ಚುನಾವಣೆ ನಡೆಯುವ ನಗರ ಸ್ಥಳೀಯ ಸಂಸ್ಥೆಗಳ ವಾರ್ಡ್ ವ್ಯಾಪ್ತಿಯಲ್ಲಿ ಚುನಾವಣಾ ನೀತಿ ಸಂಹಿತೆಯು ದಿನಾಂಕ: 29-11-2017 ರಿಂದ ಜಾರಿಗೆ ಬರಲಿದ್ದು, ದಿನಾಂಕ: 20-12-2017 ರವರೆಗೆ ಜಾರಿಯಲ್ಲಿರುತ್ತದೆ. ಜಿಲ್ಲಾಧಿಕಾರಿಗಳು ಸದಾಚಾರ ಸಂಹಿತೆಯು ಯಾವುದೇ ರೀತಿಯಲ್ಲೂ ಉಲ್ಲಂಘನೆಯಾಗದಂತೆ ನೋಡಿಕೊಳ್ಳತಕ್ಕದ್ದು.

ಆದೇಶಾನುಸಾರ

(ಎನ್.ಆರ್.ನಾಗರಾಜು)
ಅಧೀನ ಕಾರ್ಯದರ್ಶಿ
ರಾಜ್ಯ ಚುನಾವಣಾ ಆಯೋಗ, ಕರ್ನಾಟಕ
22/11/17

ಇವರಿಗೆ

1. ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು ರವರಿಗೆ ಮಾಹಿತಿಗಾಗಿ.
2. ಜಿಲ್ಲಾಧಿಕಾರಿಗಳು ಬೆಂಗಳೂರು ನಗರ, ಚಿಕ್ಕಮಗಳೂರು, ವಿಜಯಪುರ ಮತ್ತು ಕಲಬುರಗಿ, ಜಿಲ್ಲೆ.
3. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಈ ಆದೇಶವನ್ನು ಈ ದಿನವೇ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ 50 ಪ್ರತಿಗಳನ್ನು ರಾಜ್ಯ ಚುನಾವಣಾ ಆಯೋಗಕ್ಕೆ ಕಳುಹಿಸಿಕೊಡುವುದು.